ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು
ನೂರ ನಲವತ್ತಮೂರನೆಯ ಅಧಿವೇಶನ
ಶುಕ್ರವಾರ, ದಿನಾಂಕ : 05 ನೇ ಫೆಬ್ರುವರಿ, 2021

ಗ್ರಾಮ ಪಂಚಾಯತಿಗಳಲ್ಲಿ ಖಾಲಿಯಿರುವ ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳ ನೇಮಕದ ಬಗ್ಗೆ

ಶ್ರೀ ಎಂ. ನಾರಾಯಣಸ್ವಾಮಿ(ಸ್ಥಳೀಯ ಸಂಸ್ಥೆಗಳ ಕ್ಷೇತ್ರ) -

446 (580) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ -

(ಅ) ರಾಜ್ಯದ ಗ್ರಾಮ ಪಂಚಾಯತಿಗಳಲ್ಲಿ ಖಾಲಿಯಾಗಿರುವ ಪಂಚಾಯತಿ ಅಭಿವೃದ್ಧಿ ಅಧಿಕಾರಿ ಹಾಗೂ ಸೆಕ್ರಟರಿ ಗ್ರೇಡ್ -1 ಹುದ್ದೆಗಳ ಸಂಖ್ಯೆ ಎಷ್ಟು;

(ಆ) ಕೆಲವು ಗ್ರಾಮ ಪಂಚಾಯತಿಗಳು ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳ ಕೊರತೆಯನ್ನು ಎದುರಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಇ) ಎಷ್ಟು ಜನ ಶಾಸಕರು ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳ ನಿಯೋಜನೆ/ ಪ್ರಭಾರದ ಮೇಲೆ ಶಾಸಕರ ಆಪ್ತ ಸಹಾಯಕರನ್ನಾಗಿ ನೇಮಿಸಿಕೊಂಡಿದ್ದಾರೆ ಹಾಗೂ ಆಪ್ತ ಸಹಾಯಕರುಗಳ ಸಂಖ್ಯೆ ಎಷ್ಟು; (ಸಂಪೂರ್ಣ ವಿವರ ನೀಡುವುದು)

(ಈ) ಈ ಅಧಿಕಾರಿಗಳು ಗ್ರಾಮ ಪಂಚಾಯತಿಗಳಲ್ಲಿ ಕಾರ್ಯ ನಿರ್ವಹಿಸದೇ ಇರುವುದರಿಂದ ಗ್ರಾಮೀಣ ಪ್ರದೇಶಗಳಲ್ಲಿ ಸರ್ಕಾರದ ವಿವಿಧ ಯೋಜನೆಗಳನ್ನು ಸೂಕ್ತ ರೀತಿಯಲ್ಲಿ ಜನ ಸಾಮಾನ್ಯರಿಗೆ ತಲುಪಿಸುವುದರಲ್ಲಿ ಸಾಧ್ಯವಾಗದೇ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಉ) ಬಂದಿದ್ದಲ್ಲಿ, ಅಂತಹ ಅಧಿಕಾರಿಗಳನ್ನು ಮರಳಿ ಮಾತೃ ಇಲಾಖೆಗೆ/ ಗ್ರಾಮ ಪಂಚಾಯತಿಗಳಿಗೆ ಕಳುಹಿಸಲು ಸರ್ಕಾರ ಕೈಗೊಂಡ ಕ್ರಮಗಳೇನು? (ಸಂಪೂರ್ಣ ಮಾಹಿತಿ ನೀಡುವುದು)